# ಗ್ರಾ.ಪಂಚಾಯಿತಿ ಚುನಾವಣೆ ಮುಂದೂಡಲು ಸಾಧ್ಯವಿಲ್ಲ

**ಬೆಂಗಳೂರು:** ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಮುಂದೂಡಲು ಸಾಧ್ಯವಿಲ್ಲ ಎಂದು ರಾಜ್ಯ ಚುನಾವಣಾ ಆಯೋಗ ಹೈಕೋರ್ಟ್‌ಗೆ ಸ್ಪಷ್ಟಪಡಿಸಿದೆ.

ಗ್ರಾ.ಪಂ.ಗಳಿಗೆ ಶೀಘ್ರ ಚುನಾವಣೆ ನಡೆಸಲು ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ನಿರ್ದೇಶಿಸುವಂತೆ ಕೋರಿ ವಿಧಾನಪರಿಷತ್ ಸದಸ್ಯ ಕೆ.ಸಿ. ಕೊಂಡಯ್ಯ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಶುಕ್ರವಾರ ವಿಚಾರಣೆ ನಡೆಸಿತು. ಚುನಾವಣಾ ಆಯೋಗದ ಪರ ವಕೀಲ ಕೆ.ಎನ್. ಫಣೀಂದ್ರ ಲಿಖಿತ ಹೇಳಿಕೆ ಸಲ್ಲಿಸಿ, ಕೋವಿಡ್ ಹಿನ್ನೆಲೆಯಲ್ಲಿ ಚುನಾವಣೆಗಳನ್ನು ಮುಂದೂಡುವಂತೆ ಕೋರಿ ಸರ್ಕಾರ ಅ.3ರಂದು ಬರೆದಿದ್ದ ಪತ್ರದಲ್ಲಿನ ಅಂಶಗಳ ಬಗ್ಗೆ ಚರ್ಚಿಸಿದ ಬಳಿಕ ಚುನಾವಣೆ ಮುಂದೂಡಬಾರದೆಂಬ ತೀರ್ಮಾನಕ್ಕೆ ಬರಲಾಗಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು. ಈಗಾಗಲೆ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಸಂಭಾವ್ಯ ವೇಳಾಪಟ್ಟಿಯನ್ನೂ ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. ಅದನ್ನು ನ್ಯಾಯಾಲಯ ಪರಿಗಣಿಸಬೇಕು ಎಂದು ಮನವಿ ಮಾಡಿದರು.

ಅದಕ್ಕೆ ನ್ಯಾಯಪೀಠ, ಆಯೋಗ ಚುನಾವಣೆ ನಡೆಸಬಹುದಲ್ಲವೆ ಎಂದು ಸರ್ಕಾರದ ಪರ ವಕೀಲರನ್ನು ಪ್ರಶ್ನಿಸಿತು. ಈ ಸಂಬಂಧ ಅಡ್ವೋಕೇಟ್ ಜನರಲ್ ವಾದ ಮಂಡಿಸಲಿದ್ದು, ಅದಕ್ಕಾಗಿ ಕಾಲಾವಕಾಶ ನೀಡುವಂತೆ ಸರ್ಕಾರಿ ವಕೀಲರು ಮನವಿ ಮಾಡಿದರು. ಅ.21ಕ್ಕೆ ವಿಚಾರಣೆ ಮುಂದೂಡಲಾಯಿತು.